ಘನತೆವೆತ್ತ ರಾಜ್ಯಪಾಲರು ಬೆಳಿಗ್ಗೆ 10.55 ಗಂಟೆಗೆ ವಿಧಾನಸೌಧದ ಮಹಾದ್ವಾರದ ಬೃಹತ್ ಮೆಟ್ಟಿಲುಗಳ ಬಳಿ ಆಗಮಿಸಿದರು. ಘನತೆವೆತ್ತ ರಾಜ್ಯಪಾಲರು ತಮ್ಮ ಕಾರಿನಿಂದ ಇಳಿದ ಬಳಿಕ ಅವರನ್ನು ಮಾನ್ಯ ಸಭಾಧ್ಯಕ್ಷರು, ಮಾನ್ಯ ಸಭಾಪತಿಯವರು, ಮಾನ್ಯ ಮುಖ್ಯಮಂತ್ರಿಯವರು, ಮಾನ್ಯ ಸಂಸದೀಯ ವ್ಯವಹಾರ ಸಚಿವರು ಮತ್ತು ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಸಚಿವಾಲಯದ ಕಾರ್ಯದರ್ಶಿಗಳು ಸ್ವಾಗತಿಸಿ, ಮಹಾದ್ವಾರದ ಬಳಿ ಕರೆದುಕೊಂಡು ಬಂದು. ಅಲ್ಲಿ ಈ ಕೆಳಕಂಡ ಕ್ರಮದಲ್ಲಿ ಮೆರವಣಿಗೆಯನ್ನು ರೂಪಿಸಲಾಯಿತು.

ಶ್ರೀ ಪಿ. ಓಂಪ್ರಕಾಶ್
ವಿಧಾನಸಭೆ ಕಾರ್ಯದರ್ಶಿ

ಶ್ರೀ ವಿ. ಶ್ರೀಶ್
ವಿಧಾನ ಪರಿಷತ್ತಿನ ಕಾರ್ಯದರ್ಶಿ

ಶ್ರೀ ಕೆ.ಜಿ.ಬೋಪಯ್ಯ
ಮಾನ್ಯ ಸಭಾಧ್ಯಕ್ಷರು

ಶ್ರೀ ಡಿ.ಹೆಚ್.ಶಂಕರಮೂರ್ತಿ
ಮಾನ್ಯ ಸಭಾಪತಿಯವರು

ಶ್ರೀ ಜಗದೀಶ್ ಶೆಟ್ಟರ್
ಮಾನ್ಯ ಮುಖ್ಯಮಂತ್ರಿಗಳು

ಶ್ರೀಹೆಚ್.ಆರ್.ಭಾರದ್ವಾಜ್
ಘನತೆವೆತ್ತ ರಾಜ್ಯಪಾಲರು

ಎಸ್.ಸುರೇಶ್‌ಕುಮಾರ್
ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಸಚಿವರು

ಎ.ಡಿ.ಸಿ.

ಮೆರವಣಿಗೆಯು ವಿಧಾನಸಭಾ ಸದನದ ಕಡೆಗೆ ಹೊರಟಿತು. ಸಭಾ ಸದನದ ದ್ವಾರದ ಬಳಿ ಮೆರವಣಿಗೆ ಬಂದ ಕೂಡಲೇ ರಾಜ್ಯಪಾಲರ ಆಗಮನವನ್ನು ಮಾರ್ಶಲ್‌ರವರು ಸಭೆಗೆ ತಿಳಿಸಿದರು ಮತ್ತು ರಾಷ್ಟ್ರಗೀತೆಯನ್ನು ನುಡಿಸಲಾಯಿತು. ರಾಜ್ಯಪಾಲರು ಸದನವನ್ನು ಪ್ರವೇಶಿಸಿ ವೇದಿಕೆಯ ಮೇಲೆ ಕುಳಿತುಕೊಳ್ಳುವ ತನಕ ಮಾನ್ಯ ಸದಸ್ಯರೆಲ್ಲರೂ ಎದ್ದು ನಿಂತುಕೊಂಡಿದ್ದರು.

ಸಭಾಸದನದ ವೇದಿಕೆಯ ಮುಂದೆ ಬಂದ ಬಳಿಕ ಮೆರವಣಿಗೆಯು ಇಬ್ಭಾಗವಾಯಿತು. ವೇದಿಕೆ ಮೇಲೆ ಮಾನ್ಯ ಅಧ್ಯಕ್ಷರು ರಾಜ್ಯಪಾಲರ ಬಲಭಾಗದಲ್ಲಿಯೂ, ಮಾನ್ಯ ಸಭಾಪತಿಯವರು ರಾಜ್ಯಪಾಲರ ಎಡಭಾಗದಲ್ಲಿಯೂ ಕುಳಿತುಕೊಂಡರು. ರಾಜ್ಯಪಾಲರು ವೇದಿಕೆಯ ಮಧ್ಯಭಾಗದ ಆಸನದಲ್ಲಿ ಕುಳಿತುಕೊಂಡರು. ಕಾರ್ಯದರ್ಶಿಯವರು ವೇದಿಕೆಯ ಮುಂದಿರುವ ಆಸನದಲ್ಲಿ ಕುಳಿತುಕೊಂಡರು.

1. **ವಿಧಾನಮಂಡಲದ ಉಭಯ ಸದನಗಳನ್ನುದ್ದೇಶಿಸಿ ಘನತೆವೆತ್ತ ರಾಜ್ಯಪಾಲರು ಮಾಡಿದ ಭಾಷಣ.**

ಘನತೆವೆತ್ತ ರಾಜ್ಯಪಾಲರಾದ ಶ್ರೀ ಹೆಚ್.ಆರ್. ಭಾರದ್ವಾಜ್‌ರವರು ಕರ್ನಾಟಕ ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಜಂಟಿ ಅಧಿವೇಶನವನ್ನುದ್ದೇಶಿಸಿ ವಿಧಾನಸಭೆಯ ಸಭಾಂಗಣದಲ್ಲಿ ದಿನಾಂಕ 04.02.2013 ರಂದು ಬೆಳಿಗ್ಗೆ 11.05 ಗಂಟೆಗೆ ಮಾಡಿದ ಭಾಷಣ.